**DECEMBER 18,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ಸ್** ಕಾರ್ಖಾನೆಯು, 2023–24ನೇ ಸಾಲಿನಲ್ಲಿ ಮಾಡಿರುವ 362 ಕೋಟಿ 07 ಲಕ್ಷ ರೂಪಾಯಿ ಲಾಭದ ಪೈಕಿ 108 ಕೋಟಿ 62 ಲಕ್ಷ ರೂಪಾಯಿಗಳ, ಲಾಂಭಾಂಶದ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಹಾಗೂ ಕಾರ್ಖಾನೆ ಅಧ್ಯಕ್ಷ ಸಿ.ಎಸ್.ನಾಡಗೌಡ ಅವರು ಹಸ್ತಾಂತರಿಸಿದರು. ಮುಖ್ಯಮಂತ್ರಿಯವರ ಪರಿಹಾರ ನಿಧಿಗೆ ಇದೇ ಸಂದರ್ಭ ಐದು ಕೋಟಿ ರೂಪಾಯಿಗಳ ಚೆಕ್ ನೀಡಲಾಯಿತು. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸನಲ್ಲಿ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕಾರ್ಖಾನೆ ಇತಿಹಾಸದಲ್ಲಿ ಇ ಷ್ಟು ಮೊತ್ತದ ಲಾಭಾಂಶದ ಚೆಕ್ ನೀಡಿರುವುದು ಇದೇ ಮೊದಲಾಗಿದೆ. 'ಸಾರ್ವಜನಿಕ ಉದ್ದಿಮೆಗಳು ಲಾಭದಾಯಕ ವಹಿವಾಟು ನಡೆಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ' ಎಂದಿದ್ದಾರೆ.

<><><>

**ಕಬ್ಬು ಕಟಾವು ಮಾಡುವ ಕಾರ್ಮಿಕರನ್ನು ಸಹ ಕರ್ನಾಟಕ ರಾಜ್ಯ ಅಸಂಘಟಿತ** ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ನೋಂದಾಯಿಸಿಕೊಂಡು, ಇಲಾಖೆ ವತಿಯಿಂದ ಹಲವು ಸವಲತ್ತುಗಳನ್ನು ಒದಗಿಸಿಕೊಡಲಾಗುವುದು ಎಂದು ರಾಜ್ಯ ಕಾರ್ಮಿಕ ಖಾತೆ ಸಚಿವ ಸಂತೋಷ ಲಾಡ ತಿಳಿಸಿದ್ದಾರೆ. ಬಡ ಜನರನ್ನು ಅತಿ ಹೆಚ್ಚಿನ ಬಡ್ಡಿ ನೀಡುವ ಆಸೆಯೊಡ್ಡಿ, ಠೇವಣಿ ಪಡೆದು, ನಂತರ ವಂಚಿಸುವ ಯತ್ನವನ್ನು ತಡೆಗಟ್ಟುವುದು ಹಾಗೂ ವಂಚಕರನ್ನು ಕಠಿಣವಾಗಿ, ಶಿಕ್ಷಿಸುವ ನಿಟ್ಟಿನಲ್ಲಿ, ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ತಿದ್ದುಪಡಿ ವಿಧೇಯಕಕ್ಕೆ ವಿಧಾನಪರಿ 'ತ್‌ನಲ್ಲಿ ಅಂಗೀಕಾರ ದೊರೆತಿದೆ.

<><><>

**ಕಲಬುರಗಿ ಜಿಲ್ಲೆ,** ಕುಮಸಿ ಗ್ರಾಮ ಪಂಚಾಯತ್ ವ್ಯಾಪ್ತಿಯ, ಗಣಜಲಖೇಡ ಗ್ರಾಮವು ರಾಜ್ಯದಲ್ಲಿಯೇ ದಿನದ 24 ಗಂಟೆ ನೀರು ಪೂರೈಕೆ ಹೊಂದಿದ ಮೊದಲ ಗ್ರಾಮ ಎಂಬ ಖ್ಯಾತಿಗೆ ಒಳಗಾಗಿದೆ. ಜಲಜೀವನ್ ಮಿಶನ್ ಮೂಲಕ ಸ್ಥಳೀಯ ಜನಪ್ರತಿನಿಧಿಗಳ ಮುತುವರ್ಜಿಯಿಂದ ಸಾಕಾರಗೊಂಡ, ನೀರು ಪೂರೈಕೆ ಯೋಜನೆಯ ಬಗ್ಗೆ ಮಾಹಿತಿ ನೀಡಿದ್ದಾರೆ ಕುಮಸಿ ಗ್ರಾಮದ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮೇನಕಾ ಜಾಧವ್

<><><>

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ** ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ; ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ತಿದ್ದುಪಡಿ ವಿಧೇಯಕವನ್ನು ವಿಧಾನಸಭೆಯ ಮುಂದೆ ಪರ್ಯಾಲೋಚನೆ ಹಾಗೂ ಅಂಗೀಕಾರಕ್ಕೆ ಮಂಡಿಸಿದರು.

<><><>

**87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು,** ನಾಡಿದ್ದು ಶುಕ್ರವಾರ ಆರಂಭಗೊಳ್ಳಲಿದ್ದು, ಸಿದ್ಧತೆಗಳು ಭರದಿಂದ ಸಾಗಿವೆ. ಮಂಡ್ಯ ನಗರದಲ್ಲಿ ಮೈಸೂರು ದಸರಾ ಮಾದರಿಯ ದೀಪಾಲಂಕಾರ ಕಂಗೊಳಿಸಲಿದೆ. ಒಟ್ಟು ಐದು ದಿನಗಳ ಕಾಲ ವಿದ್ಯುತ್ ದೀಪಾಲಂಕಾರದಿಂದ ಸಕ್ಕರೆ ನಗರಿ ಕಂಗೊಳಿಸಲಿದ್ದು, ಗುರುವಾರದಿಂದ ಆರಂಭವಾಗುವ ವಿದ್ಯುತ್ ದೀಪದಲಂಕಾರ ಸೋಮವಾರದವರೆಗೂ ಇರಲಿದೆ. ಮಂಡ್ಯ ನಗರ ಹಾಗೂ ಸುತ್ತಮುತ್ತಲ ಗ್ರಾಮಾಂತರ ವ್ಯಾಪ್ತಿ ಸೇರಿದಂತೆ 15ರಿಂದ 20 ಕಿಲೋ ಮೀಟರ್ ದೂರದವರೆಗೆ ನಗರದ ಪ್ರಮುಖ ರಸ್ತೆಗಳುದ್ದಕ್ಕೂ ದೀಪಾಲಂಕಾರ ಕಂಗೊಳಿಸಲಿದೆ. ಸಂಜೆ 6 ಗಂಟೆಯಿಂದ 10ಗಂಟೆಯವರೆಗೆ ದೀಪಾಲಂಕಾರ ವ್ಯವಸ್ಥೆ ಮಾಡಲಾಗಿದೆ.

<><><>

**ಶಿರಾ ಕ್ಷೇತ್ರದ,** ಕಾಂಗ್ರೆಸ್ ಶಾಸಕ ಟಿ.ಬಿ ಜಯಚಂದ್ರ ಅವರಿಗೆ, 2024 ನೇ ಸಾಲಿನ 'ಅತ್ಯುತ್ತಮ ಶಾಸಕ ಪ್ರಶಸ್ತಿ'ಯನ್ನು ಬೆಳಗಾವಿಯ ಸುವರ್ಣಸೌಧದಲ್ಲಿ ಪ್ರದಾನಿಸಲಾಯಿತು. ವಿಧಾನಸಭಾಧ್ಯಕ್ಷ ಯು.ಟಿ ಖಾದರ್, ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನಸಭಾ ವಿರೋಧ ಪಕ್ಷದ ನಾಯಕ ಆರ್.ಅಶೋಕ ಜೊತೆಗೂಡಿ ಪ್ರಶಸ್ತಿ ಪ್ರದಾನ ಮಾಡಿದರು.

<><><>

**ಧಾರವಾಡದ, ಆಲೂರು ವೆಂಕಟರಾವ್** ಸಾಂಸ್ಕೃತಿಕ ಭವನದಲ್ಲಿ, ತಬಲಾ ಮಾಂತ್ರಿಕ ಪಂಡಿತ ರವಿ ಕೂಡ್ಲಿಗಿ ಪ್ರಶಸ್ತಿಯನ್ನು, ಬೆಂಗಳೂರಿನ ಖ್ಯಾತ ತಬಲಾ ಪಟು, ಪಂಡಿತ ರವೀಂದ್ರ ಯಾವಗಲ್ ಅವರಿಗೆ, ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷ, ಚಂದ್ರಕಾಂತ್ ಬೆಲ್ಲದ ಅವರು, ಪ್ರದಾನ ಮಾಡಿ, ಗೌರವಿಸಿದರು.

<><><>

**ಧಾರವಾಡ ಜಿಲ್ಲಾ** ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ, ಶರಣಮ್ಮ ಗೋರೆಬಾಳ ರಚಿಸಿದ, 'ಮತ್ತೆ ನಕ್ಕಿತು ಭೂಮಿ' ಕವನ ಸಂಕಲನವನ್ನು, ಹಿರಿಯ ಸಾಹಿತಿ ವೀರಣ್ಣ ರಾಜೂರ ಬಿಡುಗಡೆ ಮಾಡಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>